# ಪ್ರಧಾನ ಮಂತ್ರಿ ಬೆಲ್ಜಿಯಂ ಪ್ರಧಾನ ಮಂತ್ರಿಯೊಂದಿಗೆ ಮಾತನಾಡಾಲಿದ್ದಾರೆ

ಮಾರ್ಚ್ 26, 2024

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಬೆಲ್ಜಿಯಂ ಪ್ರಧಾನ ಮಂತ್ರಿ ಮಾನ್ಯ ಶ್ರೀ ಅಲೆಕ್ಸಾಂಡರ್ ಡಿ ಕ್ರೂ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು.

ಬ್ರುಸೆಲ್ಸ್‌ನಲ್ಲಿ ಇತ್ತೀಚೆಗೆ ನಡೆದ ಮೊದಲ ಪರಮಾಣು ಶಕ್ತಿ ಶೃಂಗಸಭೆಯನ್ನು ಯಶಸ್ವಿಯಾಗಿ ಆಯೋಜಿಸಿದ್ದಕ್ಕಾಗಿ ಪ್ರಧಾನಮಂತ್ರಿ ಡಿ ಕ್ರೂ ಅವರನ್ನು ಪ್ರಧಾನಿ ಅಭಿನಂದಿಸಿದರು.

ಉಭಯ ನಾಯಕರು ಭಾರತ ಮತ್ತು ಬೆಲ್ಜಿಯಂ ನಡುವಿನ ಅತ್ಯುತ್ತಮ ಸಂಬಂಧಗಳನ್ನು ಪರಿಶೀಲಿಸಿದರು. ವ್ಯಾಪಾರ, ಹೂಡಿಕೆ, ಕ್ಲೀನ್ ಟೆಕ್ನಾಲಜೀಸ್, ಸೆಮಿಕಂಡಕ್ಟರ್ಸ್, ಫಾರ್ಮಾಸ್ಯುಟಿಕಲ್ಸ್, ಗ್ರೀನ್ ಹೈಡ್ರೋಜನ್, ಐಟಿ, ರಕ್ಷಣೆ, ಬಂದರುಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಅವರು ಚರ್ಚಿಸಿದರು.

ಯುರೋಪಿಯನ್ ಯೂನಿಯನ್ ಕೌನ್ಸಿಲ್ ನ ನಡೆಯುತ್ತಿರುವ ಬೆಲ್ಜಿಯನ್ ಪ್ರೆಸಿಡೆನ್ಸಿಯ ಅಡಿಯಲ್ಲಿ ಭಾರತ - ಇಯು ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸುವ ಬದ್ಧತೆಯನ್ನು ಉಭಯ ನಾಯಕರು ದೃಢಪಡಿಸಿದರು.

ಅವರು ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಪಶ್ಚಿಮ ಏಷ್ಯಾ ಪ್ರದೇಶ ಮತ್ತು ರಷ್ಯಾ-ಉಕ್ರೇನ್ ಸಂಘರ್ಷದಲ್ಲಿ ಶಾಂತಿ ಮತ್ತು ಭದ್ರತೆಯ ಆರಂಭಿಕ ಮರುಸ್ಥಾಪನೆಗಾಗಿ ಸಹಕಾರ ಮತ್ತು ಬೆಂಬಲವನ್ನು ಹೆಚ್ಚಿಸುವ ಅಗತ್ಯವನ್ನು ಅವರು ಒಪ್ಪಿಕೊಂಡರು.

ಉಭಯ ನಾಯಕರು ಸಂಪರ್ಕದಲ್ಲಿರಲು ಒಪ್ಪಿಕೊಂಡರು.

**ನವದೆಹಲಿ**
**ಮಾರ್ಚ್ 26, 2024**